**All India Radio: Bangalore**
**National Bulletin In Kannada**
**04.05.2026  07.35 a.m.**

**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**04.05.2026  07.35 a.m.**

**<><><><>**

ಮುಖ್ಯಾಂಶಗಳು

1. ನಾಲ್ಕು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಯ ಮತ ಎಣಿಕೆಗೆ ಕ್ಷಣಗಣನೆ
2. ಕರ್ನಾಟಕ ಸೇರಿದಂತೆ ೫ ರಾಜ್ಯಗಳ ೭ ವಿಧಾನಸಭಾ ಕ್ಷೇತ್ರಗಳಲ್ಲಿ ಇಂದು ಉಪಚುನಾವಣೆಯ ಮತ ಎಣಿಕೆ
3. ಪ್ರಯಾಗ್‌ರಾಜ್‌ನಲ್ಲಿ 'ಉತ್ತರ ತಂತ್ರಜ್ಞಾನ ವಿಚಾರ ಸಂಕಿರಣ' ಉದ್ಘಾಟಿಸಲಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್
4. ಹೊರ್ಮುಜ್ ಜಲಸಂಧಿಯಲ್ಲಿ ಸಿಲುಕಿರುವ ವಾಣಿಜ್ಯ ಹಡಗುಗಳನ್ನು ಸುರಕ್ಷಿತವಾಗಿ ಹೊರತರಲು ಅಮೆರಿಕದಿಂದ ಪ್ರಾಜೆಕ್ಟ್ ಫ್ರೀಡಂ ಕಾರ್ಯಾಚರಣೆ
5. ಐಪಿಎಲ್ ಟಿ-೨೦ ಕ್ರಿಕೆಟ್ : ಪಂಜಾಬ್ ಕಿಂಗ್ಸ್ ವಿರುದ್ಧ ಗುಜರಾತ್ ಟೈಟಾನ್ಸ್‌ಗೆ ೪ ವಿಕೆಟ್‌ಗಳ ಜಯ

<><><><>

ಅಸ್ಸಾಂ, ಪಶ್ಚಿಮ ಬಂಗಾಳ, ಕೇರಳಂ, ತಮಿಳುನಾಡು ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿಯ ವಿಧಾನಸಭಾ ಚುನಾವಣೆಗಳ ಹಾಗೂ ಐದು ರಾಜ್ಯಗಳ ಏಳು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮತ ಎಣಿಕೆ ಇಂದು ನಡೆಯಲಿದೆ. ಬೆಳಿಗ್ಗೆ ೮ ಗಂಟೆಯಿಂದ ಮತ ಎಣಿಕೆ ಪ್ರಕ್ರಿಯೆ ಆರಂಭವಾಗಲಿದ್ದು, ಮೊದಲು ಅಂಚೆ ಮತಪತ್ರಗಳನ್ನು ಎಣಿಕೆ ಮಾಡಲಾಗುತ್ತದೆ. ಬೆಳಿಗ್ಗೆ ೮:೩೦ಕ್ಕೆ ವಿದ್ಯುನ್ಮಾನ ಮತಯಂತ್ರ-ಇವಿಎಂಗಳ ಎಣಿಕೆ ಆರಂಭವಾಗಲಿದ್ದು, ಮಧ್ಯಾಹ್ನದ ವೇಳೆಗೆ ಆರಂಭಿಕ ಚಿತ್ರಣ ಲಭ್ಯವಾಗುವ ನಿರೀಕ್ಷೆಯಿದೆ. ಸುಗಮ ಮತ ಎಣಿಕೆಗಾಗಿ ಚುನಾವಣಾ ಆಯೋಗವು ಎಲ್ಲಾ ರಾಜ್ಯಗಳಲ್ಲಿ ಬಿಗಿ ಭದ್ರತಾ ವ್ಯವಸ್ಥೆಯನ್ನು ಮಾಡಿದೆ. ಅಸ್ಸಾಂನ ೧೨೬, ಕೇರಳಂನ ೧೪೦, ತಮಿಳುನಾಡಿನ ೨೩೪ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ಮತ ಎಣಿಕೆ

ನಡೆಯಲಿದೆ. ಪಶ್ಚಿಮ ಬಂಗಾಳದಲ್ಲಿ ಇಂದು ೧೯೩ ಸ್ಥಾನಗಳ ಎಣಿಕೆ ನಡೆಯಲಿದ್ದು, ಫಾಲ್ಟಾ ವಿಧಾನಸಭಾ ಕ್ಷೇತ್ರದ ಮರುಮತದಾನವು ಇದೇ ೨೧ರಂದು ನಡೆದು, ಇದೇ ೨೪ ರಂದು ಅದರ ಫಲಿತಾಂಶ ಪ್ರಕಟವಾಗಲಿದೆ. ಪಶ್ಚಿಮ ಬಂಗಾಳದಲ್ಲಿ ಈ ಬಾರಿ ದಾಖಲೆಯ ೯೧.೯೩ ಪ್ರತಿಷತ ಮತದಾನ ಪ್ರಮಾಣ ದಾಖಲಾಗಿದೆ. ಸ್ಥಾಪಿಸಲಾಗಿರುವ ೭೭ ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದೆ. ತಮಿಳುನಾಡಿನಲ್ಲಿ ಈ ಬಾರಿ ಶೇಕಡ ೮೫.೧೦ ರಷ್ಟು ದಾಖಲೆಯ ಮತದಾನವಾಗಿದ್ದು, ಚುನಾವಣಾ ಆಯೋಗವು ರಾಜ್ಯದ ಶಾಂತಿಯುತ ಮತದಾನ ಪ್ರಕ್ರಿಯೆಯನ್ನು ಶ್ಲಾಘಿಸಿದೆ. ಪುದುಚೇರಿಯಲ್ಲಿ ಮತ ಎಣಿಕೆಗೆ ಸಿದ್ಧತೆಗಳು ನಡೆದಿದ್ದು, ಇಂದು ವಿವಿಧ ರಾಜಕೀಯ ಪಕ್ಷಗಳ ೨೯೪ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ. ಕಳೆದ ತಿಂಗಳ ೯ರಂದು ಮತದಾನ ನಡೆದ ಕರ್ನಾಟಕದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮತ ಎಣಿಕೆ ಕಾರ್ಯ ಇಂದು ನಡೆಯಲಿದೆ. ದಾವಣಗೆರೆ ದಕ್ಷಿಣ ಮತಕ್ಷೇತ್ರದ ಶಾಸಕರಾಗಿದ್ದ ಶಾಮನೂರು ಶಿವಶಂಕರಪ್ಪ ಹಾಗೂ ಬಾಗಲಕೋಟೆ ಮತ ಕ್ಷೇತ್ರದ ಶಾಸಕರಾಗಿದ್ದ ಎಚ್.ವೈ.ಮೇಟಿ ಅವರ ನಿಧನದಿಂದಾಗಿ ತೆರವಾದ ಸ್ಥಾನಗಳಿಗಾಗಿ ಉಪಚುನಾವಣೆ ನಡೆದಿದೆ. ಭೂತಾನ್, ಈಜಿಪ್ಟ್, ಶ್ರೀಲಂಕಾ ಸೇರಿದಂತೆ ಸುಮಾರು ೨೦ ದೇಶಗಳ ಪ್ರತಿನಿಧಿಗಳು ಈ ಪ್ರಜಾಪ್ರಭುತ್ವದ ಹಬ್ಬಕ್ಕೆ ಸಾಕ್ಷಿಯಾಗಿದ್ದು, ಭಾರತದ ಚುನಾವಣಾ ವ್ಯವಸ್ಥೆಯನ್ನು ಪ್ರಶಂಸಿಸಿದ್ದಾರೆ.

<><><><>

ಪಶ್ಚಿಮ ಬಂಗಾಳದ ೨೯೩ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಪ್ರಕ್ರಿಯೆಯ ಮೇಲೆ ನಿಗಾ ಇಡಲು ಚುನಾವಣಾ ಆಯೋಗವು ಒಟ್ಟು ೪೩೨ ಮತ ಎಣಿಕೆ ವೀಕ್ಷಕರನ್ನು ನೇಮಕ ಮಾಡಿದೆ. ಉತ್ತರ ೨೪ ಪರಗಣ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂದರೆ ೪೯ ವೀಕ್ಷಕರು ಮತ್ತು ದಕ್ಷಿಣ ೨೪ ಪರಗಣ ಜಿಲ್ಲೆಯಲ್ಲಿ ೪೫ ವೀಕ್ಷಕರನ್ನು ನಿಯೋಜಿಸಲಾಗಿದೆ. ಅಲಿಪುರ್ದುವಾರ್ ಜಿಲ್ಲೆಯಲ್ಲಿ ಅತ್ಯಂತ ಕಡಿಮೆ ಎಂದರೆ ೬ ವೀಕ್ಷಕರು ಕಾರ್ಯನಿರ್ವಹಿಸಲಿದ್ದಾರೆ. ಶಾಂತಿಯುತ ಮತ ಎಣಿಕೆಗಾಗಿ ೭೭ ಪೊಲೀಸ್ ವೀಕ್ಷಕರನ್ನು ಸಹ ನೇಮಿಸಲಾಗಿದ್ದು, ಇವರು ಮತ ಎಣಿಕೆ ಕೇಂದ್ರಗಳ ಹೊರಭಾಗದಲ್ಲಿ ಕಾನೂನು ಸುವ್ಯವಸ್ಥೆಯ ಉಸ್ತುವಾರಿ ವಹಿಸಲಿದ್ದಾರೆ. ಕೇವಲ ಕ್ಯೂಆರ್ ಕೋಡ್ ಹೊಂದಿರುವ ಗುರುತಿನ ಚೀಟಿ ಇರುವವರಿಗೆ ಮಾತ್ರ ಕೇಂದ್ರದೊಳಗೆ ಪ್ರವೇಶ ನೀಡಲಾಗುತ್ತಿದ್ದು, ಮೊಬೈಲ್ ಫೋನ್

ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಸಿಆರ್‌ಪಿಎಫ್ ಮಹಾನಿರ್ದೇಶಕ ಜಿ.ಪಿ.ಸಿಂಗ್ ಈಗಾಗಲೇ ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಿದ್ದು, ಕೇಂದ್ರ ಪಡೆಗಳು ಮತ್ತು ರಾಜ್ಯ ಪೊಲೀಸರ ನಡುವೆ ಸಮನ್ವಯ ಸಾಧಿಸುವ ಮೂಲಕ ಪಾರದರ್ಶಕ ಎಣಿಕೆಗೆ ಕ್ರಮ ಕೈಗೊಳ್ಳಲಾಗಿದೆ.

<><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉತ್ತರ ತಂತ್ರಜ್ಞಾನ ವಿಚಾರ ಸಂಕಿರಣವನ್ನು ಉದ್ಘಾಟಿಸಲಿದ್ದಾರೆ. 'ರಕ್ಷಾ ತ್ರಿವೇಣಿ ಸಂಗಮ - ತಂತ್ರಜ್ಞಾನ, ಉದ್ಯಮ ಮತ್ತು ಸೇನಾ ಸಂಗಮ' ಎಂಬ ವಿಷಯದ ಅಡಿಯಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಕಾರ್ಯಾಚರಣೆಯ ಸವಾಲುಗಳನ್ನು ಎದುರಿಸಲು ಅತ್ಯಾಧುನಿಕ ಸ್ವದೇಶಿ ತಂತ್ರಜ್ಞಾನಗಳನ್ನು ಪ್ರದರ್ಶಿಸಲು ಮತ್ತು ಸಂಯೋಜಿಸಲು ಈ ವಿಚಾರಗೋಷ್ಠಿಯು ಒಂದು ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ಪ್ರದರ್ಶನದಲ್ಲಿ ಎಂಎಸ್‌ಎಂಇಗಳು, ಖಾಸಗಿ ರಕ್ಷಣಾ ತಂತ್ರಜ್ಞಾನ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು ಮತ್ತು ದೇಶಾದ್ಯಂತದ ನಾವೀನ್ಯಕಾರರು ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ. ಸುಮಾರು ೨೮೦ ಕ್ಕೂ ಹೆಚ್ಚು ಕಂಪನಿಗಳು ತಮ್ಮ ಇತ್ತೀಚಿನ ಆವಿಷ್ಕಾರಗಳು ಮತ್ತು ತಂತ್ರಜ್ಞಾನಗಳನ್ನು ಪ್ರದರ್ಶಿಸಲು ಮಳಿಗೆಗಳನ್ನು ಸ್ಥಾಪಿಸಲಿವೆ. ಭಾರತೀಯ ಸೇನೆಯ ಉತ್ತರ ಮತ್ತು ಮಧ್ಯ ಕಮಾಂಡ್ ಹಾಗೂ ಭಾರತೀಯ ರಕ್ಷಣಾ ತಯಾರಕರ ಸಂಘ ಜಂಟಿಯಾಗಿ ಈ ಮೂರು ದಿನಗಳ ಕಾರ್ಯಕ್ರಮವನ್ನು ಆಯೋಜಿಸಿವೆ.

<><><>

ಪಶ್ಚಿಮ ಏಷ್ಯಾದಲ್ಲಿ ಯುದ್ಧವನ್ನು ಕೊನೆಗಾಣಿಸುವ ನಿಟ್ಟಿನಲ್ಲಿ ಇರಾನ್ ಸಲ್ಲಿಸಿದ್ದ ೧೪ ಅಂಶಗಳ ಮಾರ್ಗಸೂಚಿಯನ್ನು ಅಮೆರಿಕ ತಿರಸ್ಕರಿಸಿದ್ದು, ಉಭಯ ದೇಶಗಳ ನಡುವಿನ ಬಿಕ್ಕಟ್ಟು ಮುಂದುವರಿಯುವ ಲಕ್ಷಣಗಳು ಕಾಣುತ್ತಿವೆ. ಸಂಘರ್ಷ ಅಂತ್ಯಗೊಳಿಸಲು ಇರಾನ್ ನೀಡಿದ್ದ ಪ್ರಸ್ತಾವನೆಗೆ ಅಮೆರಿಕ ಪ್ರತಿಕ್ರಿಯೆ ನೀಡಿದ್ದು, ಅದನ್ನು ಪ್ರಸ್ತುತ ಪರಿಶೀಲಿಸಲಾಗುತ್ತಿದೆ ಎಂದು ಇರಾನ್ ಸರ್ಕಾರದ ವಕ್ತಾರ ಇಸ್ಮಾಯಿಲ್ ಬಘಾಹಿ ತಿಳಿಸಿದ್ದಾರೆ. ಇಸ್ರೇಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್ ನೀಡಿರುವ ಪ್ರಸ್ತಾವನೆಯನ್ನು ತಾವು ಪರಿಶೀಲಿಸಿದ್ದು, ಅದು "ಸ್ವೀಕಾರಾರ್ಹವಲ್ಲ" ಎಂದು ಸ್ಪಷ್ಟಪಡಿಸಿದ್ದಾರೆ. ಇರಾನ್ ಈವರೆಗೆ ತನ್ನ ಕೃತ್ಯಗಳಿಗೆ ದೊಡ್ಡ ಮಟ್ಟದ ಬೆಲೆ ತೆತ್ತಿಲ್ಲ ಎಂದು ಹೇಳುವ ಮೂಲಕ ಅಧ್ಯಕ್ಷ ಟ್ರಂಪ್ ಅಮೆರಿಕದ

ಕಠಿಣ ನಿಲುವನ್ನು ಪುನರುಚ್ಚರಿಸಿದ್ದಾರೆ. ಪ್ರಸ್ತುತ ಉಭಯ ದೇಶಗಳ ನಡುವಿನ ಮಾತುಕತೆಗಳು ಮಧ್ಯಸ್ಥಿಕೆದಾರರ ಮೂಲಕ ಪರೋಕ್ಷವಾಗಿ ನಡೆಯುತ್ತಿದ್ದು, ಕದನ ವಿರಾಮದ ಪ್ರಯತ್ನಗಳು ಇನ್ನೂ ಅನಿಶ್ಚಿತತೆಯಲ್ಲೇ ಮುಂದುವರಿದಿವೆ.

<><><>

ಮಧ್ಯಪ್ರಾಚ್ಯದ ಸಂಘರ್ಷದ ಹಿನ್ನೆಲೆಯಲ್ಲಿ ಹಾರ್ಮುಜ್ ಜಲಸಂಧಿಯಲ್ಲಿ ಸಿಲುಕಿರುವ ವಾಣಿಜ್ಯ ಹಡಗುಗಳನ್ನು ಸುರಕ್ಷಿತವಾಗಿ ಹೊರತರಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ 'ಪ್ರಾಜೆಕ್ಟ್ ಫ್ರೀಡಂ' ಎಂಬ ಮಿಲಿಟರಿ ಕಾರ್ಯಾಚರಣೆ ಘೋಷಿಸಿದ್ದಾರೆ. ಹಲವು ರಾಷ್ಟ್ರಗಳ ಮನವಿಯ ಮೇರೆಗೆ ಈ ಮಾನವೀಯ ಕ್ರಮ ಕೈಗೊಳ್ಳಲಾಗಿದ್ದು, ಹಡಗುಗಳಲ್ಲಿನ ಸಿಬ್ಬಂದಿಗೆ ಅಗತ್ಯ ಸಾಮಗ್ರಿಗಳ ಪೂರೈಕೆ ಮತ್ತು ಮುಕ್ತ ಸಂಚಾರವನ್ನು ಖಚಿತಪಡಿಸುವುದು ಇದರ ಉದ್ದೇಶವಾಗಿದೆ. ಅಮೆರಿಕದ ಸೆಂಟ್ರಲ್ ಕಮಾಂಡ್ ಈ ಕಾರ್ಯಾಚರಣೆಗಾಗಿ ೧೫ ಸಾವಿರ ಸೈನಿಕರು, ೧೦೦ಕ್ಕೂ ಹೆಚ್ಚು ಯುದ್ಧ ವಿಮಾನಗಳು ಮತ್ತು ಕ್ಷಿಪಣಿ ಧ್ವಂಸಕ ನೌಕೆಗಳನ್ನು ನಿಯೋಜಿಸಿದೆ. ಇರಾನ್ ಜೊತೆ ರಾಜತಾಂತ್ರಿಕ ಮಾತುಕತೆಗಳು ನಡೆಯುತ್ತಿದ್ದರೂ, ಈ ಪ್ರಕ್ರಿಯೆಗೆ ಅಡ್ಡಿಪಡಿಸಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಅಧ್ಯಕ್ಷ ಟ್ರಂಪ್ ಎಚ್ಚರಿಸಿದ್ದಾರೆ. ಜಾಗತಿಕ ತೈಲ ವ್ಯಾಪಾರದ ದೃಷ್ಟಿಯಿಂದ ಅತ್ಯಂತ ಪ್ರಮುಖವಾಗಿರುವ ಈ ಜಲಸಂಧಿಯಲ್ಲಿ ಭದ್ರತೆ ಕಾಯ್ದುಕೊಳ್ಳುವುದು ಈ ಕಾರ್ಯಾಚರಣೆಯ ಪ್ರಮುಖ ಗುರಿಯಾಗಿದೆ.

<><><>

ಅರ್ಜೆಂಟೀನಾದಿಂದ ಕೇಪ್ ವರ್ಡ್‌ಗೆ ಪ್ರಯಾಣಿಸುತ್ತಿದ್ದ 'ಎಂವಿ ಹೊಂಡಿಯಸ್' ಪ್ರವಾಸಿ ಹಡಗಿನಲ್ಲಿ ಹಂತಾವೈರಸ್ ಸೋಂಕು ಹರಡಿರುವ ಶಂಕೆಯಿದ್ದು, ಮೂವರು ಸಾವನ್ನಪ್ಪಿದ್ದಾರೆ ಮತ್ತು ಮೂವರು ಅಸ್ವಸ್ಥರಾಗಿದ್ದಾರೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸಿದೆ. ಮೃತಪಟ್ಟವರಲ್ಲಿ ಇಬ್ಬರು ಡಚ್ ಪ್ರಜೆಗಳಾಗಿದ್ದಾರೆ. ಹಂತಾವೈರಸ್ ಪ್ರಮುಖವಾಗಿ ಇಲಿಗಳಂತಹ ಪ್ರಾಣಿಗಳಿಂದ ಹರಡುವ ಸೋಂಕಾಗಿದ್ದು, ಇದು ಮಾರಣಾಂತಿಕ ಉಸಿರಾಟದ ಸಮಸ್ಯೆಯನ್ನು ಉಂಟುಮಾಡುತ್ತದೆ. ಸುಮಾರು ೧೫೦ ಪ್ರಯಾಣಿಕರಿದ್ದ ಈ ಹಡಗು ಪ್ರಸ್ತುತ ಆಫ್ರಿಕಾದ ಕೇಪ್ ವರ್ಡ್ ದ್ವೀಪದ ಸಮೀಪವಿದ್ದು, ವೈದ್ಯಕೀಯ ತುರ್ತು ಪರಿಸ್ಥಿತಿಯನ್ನು ಎದುರಿಸುತ್ತಿದೆ. ಆರಂಭಿಕ ಲಕ್ಷಣಗಳಲ್ಲಿ ಜ್ವರ ಮತ್ತು ಸ್ನಾಯು ನೋವು ಕಂಡುಬರುತ್ತದೆಯಾದರೂ, ಇದು ಶ್ವಾಸಕೋಶದ ಮೇಲೆ ತೀವ್ರ ಪರಿಣಾಮ ಬೀರುವ ಸಾಧ್ಯತೆ ಇರುತ್ತದೆ.

<><><><>

ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ನಿನ್ನೆ ರಾಂಚಿಯಲ್ಲಿ ನಡೆದ ಉಚ್ಚನ್ಯಾಯಾಲಯದ ವಕೀಲರ ಸಮ್ಮೇಳನದಲ್ಲಿ ಭಾಗವಹಿಸಿದ್ದರು, ಅಲ್ಲಿನ ನ್ಯಾಯಾಂಗ ವ್ಯವಸ್ಥೆಯಲ್ಲಿನ ಸವಾಲುಗಳು, ಸುಧಾರಣೆಗಳು ಮತ್ತು ವಕೀಲರ ಪಾತ್ರದ ಕುರಿತು ಚರ್ಚೆಗಳು ನಡೆದವು. ತಮ್ಮ ಭಾಷಣದಲ್ಲಿ ಅವರು, ನ್ಯಾಯ ವ್ಯವಸ್ಥೆಯನ್ನು ಹೆಚ್ಚು ಸುಲಭವಾಗಿ ಮತ್ತು ಬಲಿಷ್ಠವಾಗಿಸುವಲ್ಲಿ ಸಕ್ರಿಯ ಪಾತ್ರ ವಹಿಸುವಂತೆ ವಕೀಲರಿಗೆ ಕರೆ ನೀಡಿದರು. 'ಸಂಸದ್ ಸಾಂಸ್ಕೃತಿಕ ಮಹೋತ್ಸವ ಹಾಗೂ ಸ್ವದೇಶಿ ಮೇಳ'ದ ಸಮಾರೋಪ ಸಮಾರಂಭದಲ್ಲಿಯೂ ಭಾಗವಹಿಸಿದ ಸಚಿವರು ಸ್ಥಳೀಯ ಉತ್ಪನ್ನಗಳನ್ನು ಉತ್ತೇಜಿಸಲು ಒತ್ತು ನೀಡಿದರು.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಗುಜರಾತ್ ಟೈಟಾನ್ಸ್ ತಂಡ ೪ ವಿಕೆಟ್‌ಗಳ ರೋಚಕ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೬೩ ರನ್ ಗಳಿಸಿತ್ತು. ಪ್ರತಿಯಾಗಿ ಗುಜರಾತ್ ತಂಡ ೧೯.೫ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೬೭ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ಮುಂಬೈ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>